ಆ) ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ. ರಾಜ್ಯದಲ್ಲಿ ಒಟ್ಟು 837 ಪಶುವೈದ್ಯಾಧಿಗಳ ಹುದ್ದೆ ಖಾಲಿ ಇರುತ್ತವೆ. ಚಾಮರಾಜನಗರ ಜಿಲ್ಲೆಯಲ್ಲಿ 19 ಪಶುವೈದ್ಯಾಧಿಕಾರಿಗಳ ಹುದ್ದೆ ಭರ್ತಿಯಾಗಿರುತ್ತವೆ. 11 ಪಶುವೈದ್ಯಾಧಿಕಾರಿಗಳ ಹುದ್ದೆ ಖಾಲಿಯಿದ್ದು, ಚಾಮರಾಜನಗರ ಜಿಲ್ಲೆಯಲ್ಲಿ ಸಹಾಯಕ ನಿರ್ದೇಶಕರ ಹುದ್ದೆ ಖಾಲಿ ಇರುವುದಿಲ್ಲ.

ಇ) ಸರ್ಕಾರದಿಂದ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ಆಯವ್ಯಯದಲ್ಲಿ ನಿಗದಿಯಾದ ಅನುದಾನದಲ್ಲಿ ಸರಿಯಾದ ಔಷಧಿಗಳನ್ನು ಸರಬರಾಜು ಮಾಡಲಾಗುತ್ತಿದೆ.

ಈ) 2006–07ನೇ ಸಾಲಿನಲ್ಲಿ ಒಟ್ಟು 236 ಪಶುವೈದ್ಯರನ್ನು ನೇಮಿಸಿ ಆದೇಶ ನೀಡಿದೆ. 187 ಪಶುವೈದ್ಯರು ಸೇವೆಗೆ ಹಾಜರಾಗಿದ್ದಾರೆ ಇದಲ್ಲದೆ ಮುನಃ ಪಶುವೈದ್ಯರನ್ನು ನೇಮಿಸುವ ಪ್ರಕ್ರಿಯೆಯನ್ನು ಪ್ರಾರಂಭಿಸಿದೆ.

582 (907) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹಿಂದುಳಿದ ಗಡಿ ಪ್ರದೇಶ ಚಾಮರಾಜನಗರ ಜಿಲ್ಲೆಯು ಸೇರಿದಂತೆ ರಾಜ್ಯದ್ಯಂತ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ;

ಆ) ಹಾಗಿದ್ದಲ್ಲಿ ಯಾವಾಗ ಪ್ರಾರಂಭ ಮಾಡಲಾಗುವುದು;

ಇ) ಚಾಮರಾಜನಗರ ಜಿಲ್ಲೆಯಲ್ಲಿ ಎಲ್ಲೆಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ತೆರೆಯಲಾಗುವುದು?

ಶ್ರೀ ವಿ.ಎಸ್. ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು) :

ಅ,ಆ,ಇ) ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

583 (908) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯಾದ್ಯಂತ ಹಿಂದುಳಿದ ಗಡಿ ಪ್ರದೇಶ ಚಾಮರಾಜನಗರ ಜಿಲ್ಲೆಯು ಸೇರಿದಂತೆ ಕಾರ್ಯ ನಿರ್ವಹಿಸುತ್ತಿರುವ ಹಾಸ್ಟಲ್‌ಗಳ ಸಂಖ್ಯೆ ಎಷ್ಟು;

ಆ) ಈ ಹಾಸ್ಟಲ್‌ಗಳಲ್ಲಿ ವಿದ್ಯಾರ್ಥಿಗಳ ಹಾಸ್ಟಲ್‌ಗಳೆಷ್ಟು ಹಾಗೂ ವಿದ್ಯಾರ್ಥಿನಿಯರ ಹಾಸ್ಟಲ್‌ಗಳೆಷ್ಟು;

ಇ) ವಸತಿ ನಿಲಯಗಳಲ್ಲಿನ ಕಡೆ ಹೊಸದಾಗಿ ವಸತಿ ನಿಲಯಗಳನ್ನು ತೆರೆಯುವ ಯೋಜನೆಯಾದರೂ ಇದೆಯೇ;

ಈ) ಹಾಗಿದ್ದಲ್ಲಿ ಯಾವಾಗ ತೆರೆಯಲಾಗುವುದು?